ಹಣವನ್ನು ಬಿಡುಗಡೆ ಮಾಡುತ್ತಿದ್ದು, 1989–90 ನೇ ಸಾಲಿನಲ್ಲಿ ರೂ. 15.65 ಕೋಟಿ ರೂಪಾಯಿಗಳನ್ನು ಈ ಕಾರ್ಯಕ್ರಮಗಳಿಗಾಗಿ ಬಿಡುಗಡೆ ಮಾಡಲಾಗಿದೆ.

ಆ) ಹೌದು.

ಇ) ಉದ್ಭವಿಸುವುದಿಲ್ಲ.

ವಿಷಯ :– ರಾಯಚೂರು ಜಿಲ್ಲೆಯಲ್ಲಿ ಅಂಗನವಾಡಿ ಕಾರ್ಯಕ್ರಮ ಜಾರಿ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 787 (1160)

ಶ್ರೀ ಮಲ್ಲಿಕಾರ್ಜುನ ಬಸಪ್ಪ ದಿವಟರ್ (ಕೊಪ್ಪಳ) :– ಮಾನ್ಯ ಕಾನೂನು ಮತ್ತು ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಆ) ರಾಯಚೂರು ಜಿಲ್ಲೆಯ ಯಾವ ತಾಲ್ಲೂಕುಗಳಲ್ಲಿ ಅಂಗನವಾಡಿ ಕಾರ್ಯಕ್ರಮ ಜಾರಿಗೆ ತರಲಾಗುವುದೇ?

ಆ) ಸದರಿ ಅಂಗನವಾಡಿ ಕಾರ್ಯಕ್ರಮ ಜಾರಿಗೆ ತಂದಿರುವ ತಾಲ್ಲೂಕುಗಳಾವುವು, ಹಾಗಿದ್ದಲ್ಲಿ ಈ ತಾಲ್ಲೂಕುಗಳಲ್ಲಿ ಯಾವಾಗ ಅಂಗನವಾಡಿ ಕಾರ್ಯಕ್ರಮ ಯೋಜನೆ ತರಲಾಗುವುದು ?

ಶ್ರೀ ಬಿ. ಶಿವಣ್ಣ (ಕಾನೂನು ಮತ್ತು ಸಮಾಜ ಕಲ್ಯಾಣ ಸಚಿವರು) :–

ಆ) ಯಲ್ಬುರ್ಗ, ಕುಷ್ಟಗಿ, ಲಿಂಗಸುಗೂರು, ದೇವದುರ್ಗ, ಮಾನ್ವಿ ಮತ್ತು ರಾಯಚೂರು ತಾಲ್ಲೂಕುಗಳಲ್ಲಿ ಅಂಗನವಾಡಿ ಕಾರ್ಯಕ್ರಮ ಅನುಷ್ಠಾನದಲ್ಲಿದೆ.

ಆ) 'ಆ' ನ ಉತ್ತರದಿಂದ ಉದ್ಭವಿಸುವುದಿಲ್ಲ.

ವಿಷಯ :– ಅಬಕಾರಿ ಇಲಾಖೆಯಲ್ಲಿರುವ ಹರಿಜನ ಇನ್ಸ್‌ಪೆಕ್ಟರುಗಳ ಸಂಖ್ಯೆ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 791 (1231)

ಶ್ರೀಮತಿ ಮೋಟಮ್ಮ (ಮೂಡಿಗೆರೆ) :– ಮಾನ್ಯ ಅಬಕಾರಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಆ) ಅಬಕಾರಿ ಇಲಾಖೆಯಲ್ಲಿ ಎಷ್ಟು ಅಬಕಾರಿ ಇನ್ಸ್‌ಪೆಕ್ಟರ್ ಹಾಗೂ ಅಬಕಾರಿ ಸರ್ಕಲ್ ಇನ್ಸ್‌ಪೆಕ್ಟರ್ ಇದ್ದಾರೆ, ಇವರಲ್ಲಿ ಹರಿಜನ ಗಿರಿಜನರೆಷ್ಟು ?

ಆ) ಈ ಹುದ್ದೆಗಳ ಆಯ್ಕೆಯಲ್ಲಿ ರೋಷ್ಟರ್ ನಿಯಮ ಅನುಸರಿಸಿದೆಯೇ, ಅನುಸರಿಸದಿದ್ದಲ್ಲಿ ಸರ್ಕಾರ ಯಾವ ಕ್ರಮ ತೆಗೆದುಕೊಳ್ಳುವುದು ?

ಶ್ರೀ ಕೆ. ಶಿವಮೂರ್ತಿ (ಅಬಕಾರಿ ರಾಜ್ಯ ಸಚಿವರು) :–

ಆ) ಅಬಕಾರಿ ಇನ್ಸ್‌ಪೆಕ್ಟರ್‌ಗಳು — 250.

ಅದರಲ್ಲಿ ಪರಿಶಿಷ್ಟ ಜಾತಿ — 27

ಪರಿಶಿಷ್ಟ ವರ್ಗ — 4

(ಅಬಕಾರಿ ಇಲಾಖೆಯಲ್ಲಿ ಸರ್ಕಲ್ ಇನ್ಸ್‌ಪೆಕ್ಟರ್ ಹುದ್ದೆ ಇರುವುದಿಲ್ಲ.)

ಆ) ರೋಸ್ಟರ್ ನಿಯಮವನ್ನು ಅನುಸರಿಸಿದೆ.